ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1662(1967)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

ವಿಷಯ : KIADB ವತಿಯಿಂದ ಭೂಸ್ವಾಧೀನ ಮಾಡಿಕೊಂಡಿರುವ ಜಮೀನುಗಳ ಬಗ್ಗೆ

(ಅ) ಕಳೆದ 3 ವರ್ಷಗಳಲ್ಲಿ ಕೈಗಾರಿಕಾ ಪ್ರದೇಶಗಳನ್ನು ಸ್ಥಾಪನೆ ಮಾಡುವ ಉದ್ದೇಶದಿಂದ ಯಾವ ಯಾವ ಪ್ರದೇಶಗಳಲ್ಲಿ ಎಷ್ಟೇಷ್ಟು ಜಮೀನು ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ಹಾಗೂ ಯಾವ ಉದ್ದೇಶಗಳಿಗೆ ಬಳಸಲಾಗಿದೆ; (ಯೋಜನೆವಾರು ಹಾಗೂ ಪ್ರಕರಣವಾರು ದಾಖಲೆಯೊಂದಿಗೆ ಮಾಹಿತಿ ನೀಡುವುದು)

(ಆ) KIADB ಭೂಸ್ವಾಧೀನ ಮಾಡಿಕೊಂಡಿರುವ ಜಮೀನುಗಳಿಗೆ ಪರಿಹಾರ ನೀಡಲಾಗಿದೆಯೇ; ಸರ್ಕಾರ ನಿಗದಿಪಡಿಸಿರುವ ಮೌಲ್ಯದಂತೆ ಪ್ರಕರಣವಾರು ಪರಿಹಾರ ನೀಡಲಾಗಿರುವುದು ಎಷ್ಟು;(ವಿವರವಾರ ಮಾಹಿತಿ ನೀಡುವುದು)

(ಇ) ಭೂಸ್ವಾಧೀನ ಮಾಡಿಕೊಳ್ಳುವ ಸಂದರ್ಭದಲ್ಲಿ KIADB ಅಧಿಕಾರಿಗಳು ಮಧ್ಯವರ್ತಿಗಳೊಂದಿಗೆ ಶಾಮೀಲಾಗಿ ರೈತರಿಂದ ಕನಿಷ್ಠ ಬೆಲೆಗೆ ಜಮೀನನ್ನು ಖರೀದಿಸಿ ನಂತರ KIADB ಗೆ ಹೆಚ್ಚಿನ ಬೆಲೆಗೆ ನಿಗದಿಪಡಿಸಿಕೊಂಡು ಅವ್ಯವಹಾರ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಭೂಸ್ವಾದೀನ ಮಾಡಿದ ನಂತರ ಯಾವ ಅಭಿವೃದ್ದಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; KTPP ನಿಯಮ ಪಾಲನೆ ಆಗಿದೆಯೇ; (ಪ್ರಕರಣವಾರು ಟೆಂಡರ್ ವಿವರಗಳೊಂದಿಗೆ ಮಾಹಿತಿ ನೀಡುವುದು)

(ಉ) ಟೆಂಡರ್ ಕಾಮಗಾರಿ ನೀಡುವಾಗ ಕೆಲವು ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ಅರ್ಹತೆಗಳನ್ನು ನಿಗದಿಪಡಿಸಿ ಅವ್ಯವಹಾರದಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಯಾವ ಕ್ರಮ ಕೈಗೊಳ್ಳಲಾಗಿದೆ?